# ಉಪ್ಪಿನಂಗಡಿ: ವಿಜಯ ವಿಕ್ರಮ ಕಂಬಳದ ಆಮಂತ್ರಣ ವಿತರಣೆ

## ಕಂಬಳ ಉಳಿಸುವ ನಿಟ್ಟಿನಲ್ಲಿ ಯಾವುದೇ ಹೋರಾಟಕ್ಕೂ ಸಿದ್ಧ

**ಅಶೋಕ್ ಕುಮಾರ್ ರೈ ಕೋಡಿಂಬಾಡಿ**



ಉಪ್ಪಿನಂಗಡಿ: ಕಂಬಳ ಕೂಟದಲ್ಲಿ ಪ್ರಾಣಿ ಹಿಂಸೆ ನಡೆಯುತ್ತಿಲ್ಲ ಎಂಬುದು ಸುಪ್ರೀಂಕೋರ್ಟ್‌ಗೂ ಮನವರಿಕೆ ಆಗಿದೆ. ಇದರಿಂದಾಗಿ, ಕಂಬಳಕ್ಕೆ ಅವಕಾಶ ನಿರಾಕರಿಸಿ ಮಧ್ಯಂತರ ಆದೇಶ ನೀಡಬೇಕೆಂದು ಪೇಟಾದವರು ಸಲ್ಲಿಸಿದ್ದ ಅರ್ಜಿಯನ್ನು ವಿಚಾರಣೆ ನಡೆಸಿದ ಸುಪ್ರೀಂಕೋರ್ಟ್‌ನ ನ್ಯಾಯಪೀಠವು ಕಂಬಳಕ್ಕೆ ತಡೆಯಾಜ್ಞೆ ನೀಡಲು ನಿರಾಕರಿಸಿದೆ. ಇನ್ನು ಮುಂದೆಯೂ ತುಳುನಾಡಿನ ಪ್ರಾಚೀನ ಜನಪದ ಕ್ರೀಡೆಯೂ, ಧಾರ್ಮಿಕ ಆರಾಧನೆಯೂ ಆಗಿರುವ ಕಂಬಳವನ್ನು ಉಳಿಸಿ ಬೆಳೆಸಲು ಯಾವುದೇ ಹೋರಾಟಕ್ಕೆ ಸಿದ್ಧರಿದ್ದೇವೆ, ಸುಪ್ರೀಂಕೋರ್ಟ್ ಕಂಬಳಕ್ಕೆ ಅವಕಾಶ ಕಲ್ಪಿಸಿರುವುದು ರಾಜ್ಯಕ್ಕೆ ಸಂದ ಜಯ ಎಂದು ಕಂಬಳ ಪರ ಕಾನೂನು ಹೋರಾಟಗಾರ, ಉಪ್ಪಿನಂಗಡಿ ವಿಜಯ- ವಿಕ್ರಮ ಜೋಡುಕೆರೆ ಕಂಬಳ ಸಮಿತಿಯ ಅಧ್ಯಕ್ಷ ಅಶೋಕ್ ಕುಮಾರ್ ರೈ ಕೋಡಿಂಬಾಡಿ ತಿಳಿಸಿದರು. ಉಪ್ಪಿನಂಗಡಿ ಪೇಟೆಯಲ್ಲಿ ಕಂಬಳದ ಆಮಂತ್ರಣ ಪತ್ರ ಹಂಚುವ ಕಾರ್ಯಕ್ರಮಕ್ಕೆ ಇಲ್ಲಿನ ಶ್ರೀ ಸಹಸ್ರಲಿಂಗೇಶ್ವರ- ಮಹಾಕಾಳಿ ದೇವಾಲಯದ ವಠಾರದಲ್ಲಿ ಅಧಿಕೃತ ಚಾಲನೆ ನೀಡಿ ಬಳಿಕ ಸುದ್ದಿಗಾರರೊಂದಿಗೆ ಅವರು ಮಾತನಾಡುತ್ತಿದ್ದರು ಕಂಬಳ ಕ್ರೀಡೆಗೆ ಅವಕಾಶ ನೀಡಲೆಂದು ಪ್ರಾಣಿಗಳ ಮೇಲಿನ ಹಿಂಸೆ (ಕರ್ನಾಟಕ ತಿದ್ದುಪಡಿ) ಮಸೂದೆಯನ್ನು ರಾಜ್ಯ ಸರಕಾರ ಅಂಗೀಕರಿಸಿದ್ದು, ಇದಕ್ಕೆ ಇನ್ನು ಕೆಲವೇ ದಿನಗಳಲ್ಲಿ ರಾಷ್ಟ್ರಪತಿಗಳ ಅಂಕಿತ ಬೀಳಲಿದೆ. ಮತ್ತೆ ಕಂಬಳ ಕ್ರೀಡೆ ನಿರಾತಂಕವಾಗಿ ಸಾಗಲಿದೆ. ಇದು ಎಲ್ಲರಿಗೂ ದೊರೆತ ಜಯ. ಆ ಮೇಲೆಯೂ ಪೇಟಾದವರು ಅಡ್ಡಿ ಪಡಿಸಿದರೆ ಅದರ ವಿರುದ್ಧ ಹೋರಾಟ ನಡೆಸುತ್ತೇವೆ ಎಂದರು.

ಕಾನೂನು ಸಮರದಿಂದ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ, ಯಾವುದೇ ಅಡೆತಡೆಗಳು ಬಂದರೂ ಕಂಬಳ ಉಳಿಸುವ ನಿಟ್ಟಿನಲ್ಲಿ ಕಾನೂನು ಹೋರಾಟದ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ ಜಾತಿ, ಧರ್ಮ, ರಾಜಕೀಯ ಬೇಧ ಮರೆತು ಹೋರಾಟ ನಡೆಸುತ್ತೇವೆ ಎಂದು ಅಶೋಕ್ ರೈ ಹೇಳಿದರು. ಉಪ್ಪಿನಂಗಡಿಯಲ್ಲಿ ಈ ಬಾರಿಯ ವಿಜಯ- ವಿಕ್ರಮ ಕಂಬಳವು ಫೆ. 24 ಮತ್ತು 25ರಂದು ಅದ್ದೂರಿಯಾಗಿ ನಡೆಯಲಿದ್ದು, ಇದು ಕಂಬಳದ ಅಂತಿಮ ವಿಜಯಕ್ಕೆ ನಾಂದಿಯಾಗಲಿ ಎಂದು ತಿಳಿಸಿದರು.

ಉಪ್ಪಿನಂಗಡಿಯ ಕಂಬಳವು ವಿಜೃಂಭಣೆಯಿಂದ ನಡೆಯಲಿದ್ದು, ಬಿಜೆಪಿ ರಾಜ್ಯಾಧ್ಯಕ್ಷ ಯಡಿಯೂರಪ್ಪ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಅಲ್ಲದೇ, ಸಂಸದರಾದ ನಳಿನ್ ಕುಮಾರ್ ಕಟೀಲ್, ಶೋಭಾ ಕರಂದ್ಲಾಜೆ, ಶಾಸಕಿ ಶಕುಂತಳಾ ಟಿ. ಶೆಟ್ಟಿ, ಸಹಕಾರ ಮಹಾ ಮಂಡಲದ ರಾಜ್ಯಾಧ್ಯಕ್ಷ ಡಾ। ಎಂ.ಎನ್. ರಾಜೇಂದ್ರಕುಮಾರ್, ಕ್ಯಾಂಪ್ಕೊ ಅಧ್ಯಕ್ಷ ಎಸ್. ಆರ್. ಸತೀಶ್ಚಂದ್ರ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ. ವಿಶೇಷವಾಗಿ ಈ ಬಾರಿ ವಿಜಯ- ವಿಕ್ರಮ ಕಂಬಳದ ಸಂದರ್ಭ ಎಲ್ಲಾ ಕಂಬಳಾಭಿಮಾನಿಗಳಿಗೆ ಅನ್ನ ಸಂತರ್ಪಣೆಯನ್ನು ಮಾಡಲಾಗಿದೆ ಎಂದರು.

ಉಪ್ಪಿನಂಗಡಿ ಶ್ರೀ ಸಹಸ್ರಲಿಂಗೇಶ್ವರ - ಮಹಾಕಾಳಿ ದೇವಸ್ಥಾನದ ವ್ಯವಸ್ಥಾಪನಾ ಸಮಿತಿಯ ಸದಸ್ಯ ಪ್ರಕಾಶ್ ರೈ ಬೆಳ್ಳಿಪ್ಪಾಡಿ ಅವರಿಗೆ ಆಮಂತ್ರಣ ಪತ್ರಿಕೆ ನೀಡುವ ಮೂಲಕ ಆಮಂತ್ರಣ ಪತ್ರಿಕೆ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಬಳಿಕ ದೇವಾಲಯದ ವಠಾರದಿಂದ ಕೊಂಬು, ವಾಲಗದೊಂದಿಗೆ ಮೆರವಣಿಗೆಯಲ್ಲಿ ಬಸ್‌ನಿಲ್ದಾಣ, ಬ್ಯಾಂಕ್‌ರಸ್ತೆ ಮೂಲಕ ಗಾಂಧಿಪಾರ್ಕ್ ಆಗಿ ಬೈಪಾಸ್ ರಸ್ತೆಯಾಗಿ ಬಂದು ಪೇಟೆಯಿಡೀ ಕಂಬಳದ ಆಮಂತ್ರಣ ಪತ್ರಿಕೆ ನೀಡಲಾಯಿತು. ಈ ಸಂದರ್ಭ ವಿಜಯ- ವಿಕ್ರಮ ಜೋಡುಕೆರೆ ಕಂಬಳ ಸಮಿತಿಯ ಗೌರವಾಧ್ಯಕ್ಷ ಎನ್. ಉಮೇಶ್ ಶೆಣೈ, ಪ್ರಧಾನ ಕಾರ್ಯದರ್ಶಿ ಕೇಶವ ಭಂಡಾರಿ ಬೆಳ್ಳಿಪ್ಪಾಡಿ ಕೈಪ, ಕೋಶಾಧಿಕಾರಿ ಸೀತಾರಾಮ ಶೆಟ್ಟಿ ಹೆಗ್ಡೆ ಹಿತ್ಲು, ಕಾರ್ಯದರ್ಶಿ ಚಂದ್ರಶೇಖರ ಮಡಿವಾಳ, ಉಪಾಧ್ಯಕ್ಷ ರಾಮಚಂದ್ರ ಮಣಿಯಾಣಿ, ವಿವಿಧ ಸಮಿತಿಯ ಪದಾಧಿಕಾರಿಗಳಾದ ಕೃಷ್ಣಪ್ರಸಾದ್ ಬೊಳ್ಳಾವು, ಸುರೇಶ್ ಅತ್ರಮಜಲು, ಯೋಗೀಶ್ ಸಾಮಾನಿ ಸಂಪಿಗೆದಡಿ, ನ್ಯಾಯವಾದಿ ಅನಿಲ್ ಕುಮಾರ್ ಉಪ್ಪಿನಂಗಡಿ, ದಿಲೀಪ್ ಶೆಟ್ಟಿ ಕರಾಯ, ಹರಿಪ್ರಸಾದ್ ಶೆಟ್ಟಿ ಬೊಳ್ಳಾವು, ಆದರ್ಶ ಶೆಟ್ಟಿ ಕಜೆಕ್ಕಾರ್, ರಮೇಶ್ ಭಂಡಾರಿ, ಹರೀಶ್ಚಂದ್ರ ಆಚಾರ್ಯ, ರಾಜಗೋಪಾಲ್ ಹೆಗ್ಡೆ, ರವಿ ಮರಿಕೆ, ಲೋಕಾನಂದ ಮತ್ತಿತರರು ಉಪಸ್ಥಿತರಿದ್ದರು.